ಈ) ಸದರಿ ಮನೆಗಳನ್ನು ಅರ್ಹ ಕೊಳಚೆ ಪ್ರದೇಶದ ನಿವಾಸಿಗಳಿಗೆ ಹಂಚಿಕೆ ಮಾಡಲಾಗಿದ್ದು, ಅನ್ಯಾಯವಾಗಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ.

ಉ) ಈ ಬಗ್ಗೆ ಕೊಳಚೆ ಪ್ರದೇಶದ ನಿವಾಸಿಗಳಿಂದ ಅನ್ಯಾಯವಾಗಿರುವ ಬಗ್ಗೆ ದೂರುಗಳು ಬಂದಲ್ಲಿ ಸಮಗ್ರವಾಗಿ ಪರಿಶೀಲಿಸಲು ಕ್ರಮ ಕೈಗೊಳ್ಳಲಾಗುವುದು.

## ಅಂಗನವಾಡಿ ಕಟ್ಟಡ ನಿರ್ಮಾಣ

**2518(2806); ಶ್ರೀ ಮಂಜುನಾಥ ಜಿ.**

ಅ) ಮುಳಬಾಗಿಲು ತಾಲ್ಲೂಕಿನಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಮುಖ್ಯ ಕೇಂದ್ರ ಹಾಗೂ ಮೈಕ್ರೋ ಕೇಂದ್ರಗಳ ಮಾಹಿತಿ ನೀಡುವುದು;

ಆ) ಸರ್ಕಾರಿ ಕಟ್ಟಡ ಮತ್ತು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಇ) ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಲಭ್ಯವಿರುವ ಕೇಂದ್ರಗಳ ಸಂಖ್ಯೆ ಎಷ್ಟು; ಸ್ಥಳ ಲಭ್ಯವಿದ್ದಲ್ಲಿ ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು (ಸಂಪೂರ್ಣ ವಿವರ ನೀಡುವುದು)?

**ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

ಅ) ಮುಳಬಾಗಿಲು ತಾಲ್ಲೂಕಿನಲ್ಲಿ 425 ಮುಖ್ಯ ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಮಿನಿ ಅಂಗನವಾಡಿ ಕೇಂದ್ರಗಳು ಇರುವುದಿಲ್ಲ.

ಆ) ಮುಳಬಾಗಿಲು ತಾಲ್ಲೂಕಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ವಿವರ ಈ ಕೆಳಕಂಡಂತಿವೆ:

| | |
|---|---|
| ಸ್ವಂತ ಕಟ್ಟಡ | 134 |
| ಇತರೆ ಸರ್ಕಾರಿ ಕಟ್ಟಡ | 83 |
| ಬಾಡಿಗೆ ಕಟ್ಟಡ | 125 |
| ಇತರೆ ಪರ್ಯಾಯ ವ್ಯವಸ್ಥೆ ಕಟ್ಟಡಗಳು | 83 |

ಇ) ಮುಳಬಾಗಿಲು ತಾಲ್ಲೂಕಿನಲ್ಲಿ 80 ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಲಭ್ಯವಿರುತ್ತದೆ.

ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ನಬಾರ್ಡ್ ಸಹಾಯಾನುದಾನದ ಆರ್.ಐ.ಡಿ.ಎಫ್ ಮತ್ತು ವಿಶೇಷ ಅಭಿವೃದ್ಧಿ ಯೋಜನೆ ಕಾರ್ಯಕ್ರಮದಡಿಯಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಜಿಲ್ಲಾ/ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯಲ್ಲಿ ಸುವರ್ಣ ಗ್ರಾಮ ಯೋಜನೆ, ಎಂ.ಎಸ್.ಡಿ.ಪಿ, ಬಿ.ಆರ್.ಜಿ.ಎಫ್. ಇನ್ನಿತರ ಯೋಜನೆಗಳಡಿಯಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

2014–15ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಕೇಂದ್ರ ಮತ್ತು ನರೇಗಾ ಹೊಂದಾಣಿಕೆ ಅನುದಾನದೊಂದಿಗೆ ಮುಳಬಾಗಿಲು ತಾಲ್ಲೂಕಿನಲ್ಲಿ 4 ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿರುತ್ತದೆ.

2015–16ನೇ ಸಾಲಿನಲ್ಲಿ ಆರ್.ಐ.ಡಿ.ಎಫ್. ನಡಿಯಲ್ಲಿ 3 ಅಂಗನವಾಡಿ ಕಟ್ಟಡ ಮತ್ತು ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ 1 ಕಟ್ಟಡ ನಿರ್ಮಿಸಲು ಕ್ರಿಯಾ ಯೋಜನೆ ಸಿದ್ದಪಡಿಲಾಗಿದೆ.

**ಕೋಳಗೇರಿ ಪ್ರದೇಶದ ಅಭಿವೃದ್ಧಿ ಕಾಮಗಾರಿಗಳು**

**2519(2807; ಶ್ರೀ ಮಂಜುನಾಥ ಜಿ.**

ಅ) ಕಳೆದ ಮೂರು ವರ್ಷಗಳಲ್ಲಿ ಮುಳಬಾಗಿಲು ವಿಧಾನಸಭಾ ಕ್ಷೇತ್ರಕ್ಕೆ ಯಾವ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ (ಯೋಜನಾವಾರು ಮಾಹಿತಿ ನೀಡುವುದು);

ಆ) ಮುಳಬಾಗಿಲು ಪುರಸಭಾ ವ್ಯಾಪ್ತಿಯಲ್ಲಿ ಬರುವ ವಾರ್ಡಗಳಲ್ಲಿರುವ ಕೊಳಗೇರಿ ಪ್ರದೇಶಗಳ ವಾಸಿಸುತ್ತಿರುವ ಜನಸಂಖ್ಯೆ ಎಷ್ಟು (ವಿವರ ನೀಡುವುದು);

ಇ) ಕಳೆದ ಮೂರು ವರ್ಷಗಳಿಂದ ಕೊಳಗೇರಿ ಪ್ರದೇಶಗಳಲ್ಲಿ ಈವರೆಗೂ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳೇನು;

ಈ) ಕೊಳಗೇರಿ ಪ್ರದೇಶಗಳಲ್ಲಿ ಈವರೆಗೂ ಎಷ್ಟು ಸಾರ್ವಜನಿಕ ಶೌಚಾಲಯಗಳನ್ನು ಹಾಗೂ ಅಂಗನವಾಡಿ ಕೇಂದ್ರಗಳನ್ನು ನಿರ್ಮಾಣ ಮಾಡಲಾಗಿದೆ (ವಿವರ ನೀಡುವುದು);

ಉ) ಕಳೆದ ಮೂರು ವರ್ಷಗಳಿಂದ ಸದರಿ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವ ನಿವಾಸಿಗಳಿಗೆ ನಿರ್ಮಾಣ ಮಾಡಿ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು; (ಫಲಾನುಭವಿಗಳ ವಿವರ ನೀಡುವುದು)?